ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2013–14 : ಡಿಸೆಂಬರ್ 15, 2014

ಪತ್ರಿಕಾ ಪ್ರಕಟಣೆ

# ಅಧಿವೇಶನದ ವರದಿಗಾಗಿ ಆಗಮಿಸಿದ್ದ ಪತ್ರಕರ್ತ ಎನ್. ಡಿ. ಶಿವಕುಮಾರ್ ನಿಧನ

ಬೆಳಗಾವಿ, ಡಿಸೆಂಬರ್ 15 (ಕರ್ನಾಟಕ ವಾರ್ತೆ ) :

ಬೆಂಗಳೂರಿನ ದಿ ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯ ಸಹಾಯಕ ಸಂಪಾದಕ ಹಾಗೂ ವಿಶೇಷ ಪ್ರತಿನಿಧಿ ಶ್ರೀ ಎನ್. ಡಿ. ಶಿವಕುಮಾರ್ ಇಲ್ಲಿ ಇಂದು ನಿಧನರಾದರು. ಅವರಿಗೆ 39 ವರ್ಷ ವಯಸ್ಸಾಗಿತ್ತು. ಶ್ರೀಯುತರು ಪತ್ನಿ ಹಾಗೂ ಪುತ್ರಿಯನ್ನು ಅಗಲಿದ್ದಾರೆ.

ಬೆಳಗಾವಿಯ ಚಳಿಗಾಲ ಅಧಿವೇಶನದ ವರದಿಗಾಗಿ ಆಗಮಿಸಿದ್ದ ಶ್ರೀ ಶಿವಕುಮಾರ್ ಅವರು ಇಂದು ಬೆಳಿಗ್ಗೆ ತೀವ್ರ ಅಸ್ವಸ್ಥರಾಗಿದ್ದರು. ಕೂಡಲೇ ಅವರನ್ನು ಚಿಕಿತ್ಸೆಗಾಗಿ ಸ್ಥಳೀಯ ಕೆ. ಎಲ್. ಇ ಆಸ್ಪತ್ರೆಗೆ ಕೊಂಡೊಯ್ಯಲಾಯಿತು. ಆಸ್ಪತ್ರೆಗೆ ದಾಖಲಿಸುವ ಮುನ್ನವೇ ಶ್ರೀ ಶಿವಕುಮಾರ್ ಅವರು ಅಸುನೀಗಿದ್ದಾರೆಂದು ಅಲ್ಲಿನ ವೈದ್ಯರು ಪ್ರಕಟಿಸಿದರು.

ಶ್ರೀ ಶಿವಕುಮಾರ್ ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆಯೇ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಹಾಗೂ ವಾರ್ತಾ ಸಚಿವ ಶ್ರೀ ಆರ್. ರೋಷನ್‌ಬೇಗ್ ಅವರು ಆಸ್ಪತ್ರೆಗೆ ಧಾವಿಸಿ ಮೃತರ ಅಂತಿಮ ದರ್ಶನ ಪಡೆದರು.

ಪ್ರವಾಸೋದ್ಯಮ ಹಾಗೂ ಉನ್ನತ ಶಿಕ್ಷಣ ಸಚಿವ ಶ್ರೀ ಆರ್.ವಿ. ದೇಶಪಾಂಡೆ, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಅಬಕಾರಿ ಸಚಿವ ಶ್ರೀ ಸತೀಶ್ ಜಾರಕಿಹೊಳಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಶ್ರೀ ಟಿ. ಬಿ. ಜಯಚಂದ್ರ, ಸಮಾಜ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ಆಡಳಿತ ಪಕ್ಷದ ಮುಖ್ಯ ಸಚೇತಕ ಶ್ರೀ ಅಶೋಕ್ ಪಟ್ಟಣ್, ಪ್ರತಿಪಕ್ಷ ನಾಯಕ ಶ್ರೀ ಜಗದೀಶ್ ಶೆಟ್ಟರ್, ಜಾತ್ಯಾತೀತ ಜನತಾದಳದ ಮುಖಂಡ ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಶಾಸಕರಾದ ಶ್ರೀ ಎಸ್. ಸುರೇಶ್‌ಕುಮಾರ್ ಮತ್ತು ಶ್ರೀ ವಿ ಉಮೇಶ್ ಕತ್ತಿ ಅವರು ಮೃತರಿಗೆ ಪುಷ್ಪ ನಮನ ಸಲ್ಲಿಸಿದರು.

ಮೃತರ ಹುಟ್ಟೂರಾದ ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ನಂದಿಹಳ್ಳಿ ಗ್ರಾಮಕ್ಕೆ ಪಾರ್ಥಿವ ಶರೀರವನ್ನು ಕೊಂಡೊಯ್ಯಲು ಬೆಳಗಾವಿ ಜಿಲ್ಲಾಡಳಿತ ಸಕಾಲಿಕ ನೆರವು ಮತ್ತು ಸಹಕಾರ ಒದಗಿಸಿತು.

************

ಡಿ ಪಿ ಎಂ